## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ
## ಸಿ.ಸಿ.669/2020

| | | |
|---|---|---|
| ಸಾಕ್ಷಿದಾರರ ಹೆಸರು | : ಗಣೇಶ್ | ಫ್ರಾಸಾ-7 |
| ತಂದೆಯ ಹೆಸರು | : ಮಹದೇವ | ಚಾಸಾ-11 |
| ವಯಸ್ಸು | : 42 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಕೂಲಿ | ದಿನಾಂಕಃ 23.10.2025 |
| ವಾಸಸ್ಥಳ | : ಚಿಕ್ಕಮಗಳೂರು | |

### :ಮುಖ್ಯ ವಿಚಾರಣೆ: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:

ನ್ಯಾಯಾಲಯದ ಮುಂದಿರುವ 1 ನೇ ಆರೋಪಿಯ ಪರಿಚಯ ನನಗಿಲ್ಲ. ಇತರೆ ಆರೋಪಿತರು ಗೈರು ಹಾಜರಿದ್ದು ಅವರ ಗುರುತುವಿಕೆಯಲ್ಲಿ ತಕರಾರು ಇಲ್ಲ ಎಂದು ಆರೋಪಿತರ ಪರ ವಕೀಲರು ತಿಳಿಸುತ್ತಾರೆ. ಚಾಸಾ-10 ರವರ ಪರಿಚಯ ನನಗಿಲ್ಲ.

ಸಾಕ್ಷಿಯು ದಿ.28.04.2017 ರ ಮಹಜರ್ ನಲ್ಲಿ ತಮ್ಮ ಸಹಿಯನ್ನು ಗುರುತಿಸಿ, ಆರು ಫೋಟೋಗಳಲ್ಲಿ ತಾವು ಇರುವ ಬಗ್ಗೆ ಗುರುತಿಸುತ್ತಾರೆ. ಮಹಜರ್ ನ್ನು ನಿಪಿ-15, ಸಾಕ್ಷಿಯ ಸಹಿಯನ್ನು ನಿಪಿ-15(ಎ) ಎಂದು ಗುರುತಿಸಲಾಯಿತು. ಫೋಟೋಗಳನ್ನು ಸಿಡಿ ಮತ್ತು ಪ್ರಮಾಣಪತ್ರದೊಂದಿಗೆ ನಿಪಿ-16 ರಿಂದ 24 ಎಂದು ಗುರುತಿಸಲಾಯಿತು.

ಸುಮಾರು 8 ವರ್ಷದ ಹಿಂದೆ ನಾನು ಮೂಡಿಗೆರೆ ಪೋಲಿಸ್ ಠಾಣೆ ಬಳಿ ಇರುವ ಲಕ್ಷ್ಮೀ ವೈನ್ಸ್ ನಲ್ಲಿ ಕೆಲಸ ಮಾಡುತ್ತಿದ್ದೆ. ಆ ಸಮಯಕ್ಕೆ ನಾನು ಮೂಡಿಗೆರೆ IB ಬಳಿ ನಡೆದುಕೊಂಡು ಹೋಗುತ್ತಿದ್ದಾಗ ಪೋಲಿಸರು ನಮ್ಮ ಸಹಿಗಳನ್ನು ಪಡೆದು, ಫೋಟೋಗಳನ್ನು ತೆಗೆದಿದ್ದಾರೆ. ಯಾವ ವಿಚಾರಕ್ಕೆ ನಮ್ಮ ಸಹಿಯನ್ನು ಪಡೆದು ಫೋಟೋಗಳನ್ನು ತೆಗೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-15 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಫ್ರಾಜ್ಞ್ಯಾ ಸ.ಅ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

### ಪಾಟೀ ಸವಾಲು: ಫ್ರಾಜ್ಞ್ಯಾ.ಸ.ಸ.ಅ. ರವರಿಂದ:

ಸಾಕ್ಷಿಗೆ ನಿಪಿ-15 ರ ಸಂಪೂರ್ಣ ವಿಚಾರವನ್ನು ಓದಿ ಹೇಳಲಾಗಿ ಸಾಕ್ಷಿಯು ಅದನ್ನು ಸಂಪೂರ್ಣವಾಗಿ ಅಲ್ಲಗಳೆಯುತ್ತಾರೆ.

ನನಗೆ ಪ್ರಕರಣದ ಬಗ್ಗೆ ಸಂಪೂರ್ಣ ಮಾಹಿತಿ ತಿಳಿದಿದ್ದರೂ ಸಹಾ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು: ಆರೋಪಿ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.</u>**
**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.